ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 27 ಇಎಸ್‌ಟಿ(2)ಎ 2018

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಅರಮನೆ ರಸ್ತೆ, ಬೆಂಗಳೂರು,
ದಿನಾಂಕ: 03-08-2018.

**ಸುತ್ತೋಲೆ**

ವಿಷಯ: 2018-19 ನೇ ಸಾಲಿನ ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಆನ್‌ಲೈನ್ ಮೂಲಕ ಬೋಧಕ/ಬೋಧಕೇತರ ಸಿಬ್ಬಂದಿ ವರ್ಗದವರ ದತ್ತಾಂಶ ದಾಖಲಿಸುವ ಬಗ್ಗೆ.

*-*-*

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 75 ಶಾಸನ 2012 ದಿನಾಂಕ: 06-02-2013ರ ಅಧಿಸೂಚನೆಯಲ್ಲಿ "ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು" (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ 2012ರನ್ನು ಜಾರಿಗೆ ತಂದಿದ್ದು ಇದರ ಅನ್ವಯ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ವರ್ಗಾವಣೆಗಳನ್ನು ನಡೆಸಲಾಗುತ್ತಿರುತ್ತದೆ.

ಈ ಕುರಿತಂತೆ ಸಿಬ್ಬಂದಿಯವರ ಮಾಹಿತಿಯನ್ನು ಸಂಗ್ರಹಿಸಬೇಕಾಗಿದ್ದು, ತಾಂತ್ರಿಕ ಶಿಕ್ಷಣ ಇಲಾಖೆಯ ಪ್ರಾಂಶುಪಾಲರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ವೈಯಕ್ತಿಕ ವಿವರಗಳೂ ಸೇರಿದಂತೆ ಸೇವಾ ವಿವರಗಳನ್ನು ಸಂಗ್ರಹಿಸಿ ಸಿಬ್ಬಂದಿಯವರ ಮಾಹಿತಿಯನ್ನು ವರ್ಗಾವಣೆಗಳಿಗೂ ಒಳಗೊಂಡಂತೆ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಉದ್ದೇಶಗಳಿಗೆ ಬಳಸಲು ಅನುಕೂಲವಾಗುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್‌ನಲ್ಲಿ ಇರುವ EMIS (Educational Management Information System) ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ನಿಗದಿತ ನಮೂನೆಯಲ್ಲಿ ಪ್ರಾಂಶುಪಾಲರ ಉಸ್ತುವಾರಿಯಲ್ಲಿ ಮಾಹಿತಿಗಳನ್ನು ದಾಖಲು ಮಾಡಬೇಕಾಗಿರುತ್ತದೆ.

ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್‌ನಲ್ಲಿ ಇರುವ EMIS (Educational Management Information System) ತಂತ್ರಾಂಶಕ್ಕೆ ಸಂಸ್ಥೆಗಳಿಗೆ ಈಗಾಗಲೇ ಒದಗಿಸಲಾಗಿರುವ User-id ಮತ್ತು Password ಬಳಸಿ EMIS ನಲ್ಲಿ Login ಆಗಿ ಲಿಂಕ್‌ಗಳ ಮೂಲಕ ಆಯಾ ಸಂಸ್ಥೆಗಳಲ್ಲಿ LIEN ಹೊಂದಿರುವ (ಅಂದರೆ ಸಂಸ್ಥೆಯಲ್ಲಿ ವೇತನವನ್ನು ಪಡೆಯುತ್ತಿರುವ) ಬೋಧಕ/ಬೋಧಕೇತರ ಸಿಬ್ಬಂದಿಗಳ (ಬೇರೆ ಸಂಸ್ಥೆಗೆ ನಿಯೋಜನೆ (ಡೆಪ್ಯುಟೇಷನ್) ಮೇರೆಗೆ ತೆರಳಿರುವ ಹಾಗೂ ರಜೆಯಲ್ಲಿ ಅಥವಾ ಅನಧಿಕೃತ ಗೈರುಹಾಜರಾಗಿರುವ ಸಿಬ್ಬಂದಿಗಳನ್ನು ಒಳಗೊಂಡಂತೆ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿಗಳ ಮಾಹಿತಿಯನ್ನು **ದಿ: 10-08-2018 ಸಂಜೆ 05:30** ರೊಳಗೆ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ.

EMIS ತಂತ್ರಾಂಶದಲ್ಲಿ ಈಗಾಗಲೇ ಸಿಬ್ಬಂದಿಗಳ ಮಾಹಿತಿಗಳು ದಾಖಲಾಗಿದ್ದು, ಸದರಿ ಮಾಹಿತಿಗಳನ್ನು ಸಿಬ್ಬಂದಿಗಳ ಸಮುಖದಲ್ಲಿ ಮಾಹಿತಿಗಳನ್ನು ಪ್ರಾಂಶುಪಾಲರು ಮತ್ತೊಮ್ಮೆ ಪರಿಶೀಲಿಸಲು ಸೂಚಿಸಲಾಗಿದೆ ಹಾಗೂ ಯಾವುದೇ ಬದಲಾವಣೆಗಳನ್ನು ಮಾಡಬೇಕಾದಲ್ಲಿ dteupload@gmail.com ಗೆ ಸದರಿ ಸಿಬ್ಬಂದಿಗಳ ಕೆಜಿಐಡಿ ನಂ, ಬದಲಾವಣೆಯ ವಿವರ ಹಾಗೂ ಅದಕ್ಕೆ ಸೂಕ್ತ ದಾಖಲಾತಿಗಳನ್ನು ಲಗತ್ತಿಸಿ ಇ-ಮೇಲ್ ಮಾಡಲು ಸೂಚಿಸಲಾಗಿದೆ. ನಂತರ ಸದರಿಯವರ ಮಾಹಿತಿಗಳನ್ನು ಬದಲಾವಣೆ ಮಾಡಲು ಅವಕಾಶವನ್ನು ಕಲ್ಪಿಸಲಾಗುವುದು. ಇಲಾಖೆಗೆ ನೂತನವಾಗಿ ಸೇರ್ಪಡೆಗೊಂಡ ಸಿಬ್ಬಂದಿಗಳ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ಪ್ರಾಂಶುಪಾಲರ ಉಸ್ತುವಾರಿಯಲ್ಲಿ ದಾಖಲಿಸಲು ಸೂಚಿಸಲಾಗಿರುತ್ತದೆ. ಯಾವುದೇ ಸಿಬ್ಬಂದಿಯ ಯಾವುದೇ ರೀತಿಯ ಮಾಹಿತಿಯನ್ನು ನಿಗದಿತ ಸಮಯದೊಳಗೆ ಸಮರ್ಪಕವಾಗಿ ಒದಗಿಸದಿದ್ದಲ್ಲಿ ಅಥವಾ ತಪ್ಪು ಮಾಹಿತಿ ನೀಡಿದಲ್ಲಿ ಸಂಬಂಧಪಟ್ಟ ಸಿಬ್ಬಂದಿ ಮತ್ತು ಸಂಸ್ಥೆಯ ಮುಖ್ಯಸ್ಥರ ವಿರುದ್ಧ ಕೆ.ಸಿ.ಎಸ್ (ಸಿಸಿಎ) 1957ರ ಪ್ರಕಾರ ಶಿಸ್ತಿನ ಕ್ರಮಕ್ಕೆ ಗುರಿ ಪಡಿಸಲಾಗುವುದು ಎಂದು ಸೂಚಿಸಲಾಗಿದೆ.

ನಿರ್ದೇಶಕರು

ಪ್ರತಿ:

1. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇಲ್ಲಿನ ಎಲ್ಲಾ ಅಧಿಕಾರಿ /ಸಿಬ್ಬಂದಿಗಳಿಗೆ.
2. ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್/ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರು/ಪ್ರಭಾರೆ ಪ್ರಾಂಶುಪಾಲರು (ಸಂಬಂಧಪಟ್ಟ ಸಂಸ್ಥೆಯ ಬೋಧಕ/ಬೋಧಕೇತರ ಸಿಬ್ಬಂದಿಗಳ ಗಮನಕ್ಕೆ ತರಲು ಹಾಗೂ ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು).
3. ಇ-ಆಡಳಿತ. ಕೂಡಲೆ ವೆಬ್‌ಸೈಟ್ ನಲ್ಲಿ ಪ್ರಚುರ ಪಡಿಸಲು.
4. ನಿರ್ದೇಶಕರ ಆಪ್ತಶಾಖೆ.